ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 11–9–2017

# ಪತ್ರಿಕಾ ಆಮಂತ್ರಣ

1. ರಾಜ್ಯ ಮಟ್ಟದ ರಾಷ್ಟ್ರೀಯ ಸೇವಾ ಯೋಜನೆಯ ಪರಿಸರ ಮನನ ಹಾಗೂ ಯೂತ್ ರೆಡ್‌ಕ್ರಾಸ್ ಸಂಯೋಜಕರ ಸಮಾವೇಶ:

   ಉದ್ಘಾಟನೆ:
   ಪ್ರಮೋದ್ ಮಧ್ವರಾಜ್, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

   ಅಧ್ಯಕ್ಷತೆ:
   ಡಾ. ಬಿ.ಎಲ್. ಶಂಕರ್, ಅಧ್ಯಕ್ಷರು, ಕರ್ನಾಟಕ ಚಿತ್ರಕಲಾ ಪರಿಷತ್, ಬೆಂಗಳೂರು.

   ದಿನಾಂಕ: 12–09–2017 ಮಂಗಳವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ.
   ಸ್ಥಳ: ಕರ್ನಾಟಕ ಚಿತ್ರಕಲಾ ಪರಿಷತ್, ಕುಮಾರಕೃಪಾ ರಸ್ತೆ, ಬೆಂಗಳೂರು.

2. **National Symposium on "Emerging trends in plant health management in relation to climate change".**

   **Inauguration:**

   **Dr. K. Ramaswamy, Vice Chancellor, Tamil Nadu Agricultural University, Coimbatore.**

   **Presidential remarks:**

   **Dr. D.L. Maheswar, Vice Chancellor, University of Horticultural Sciences, Bagalkot.**

   **Date : 12-09-2017, Tuesday, Time : 10.00 AM.**
   **Place : College of Horticulture, Bengaluru – 560 065**

3. ಪತ್ರಿಕಾಗೋಷ್ಠಿ:

ಮಕ್ಕಳ ಹಕ್ಕುಗಳ ಪ್ರಾದೇಶಿಕ ಸಮ್ಮೇಳನ – 2017 ರ ಕುರಿತು

ದಿನಾಂಕ: 12–09–2017 ಮಂಗಳವಾರ, ಸಮಯ: ಮಧ್ಯಾಹ್ನ 12.00 ಗಂಟೆಗೆ.
ಸ್ಥಳ: ಸಭಾಪತಿಯವರ ಕೊಠಡಿ ಸಂಖ್ಯೆ 117, ವಿಧಾನಸೌಧ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

ಸಂಖ್ಯೆ 49/174

## ವಿಕಲ ಚೇತನರೆಂದುಕೊಂಡು ಬದುಕಿನಲ್ಲಿ ನಿರಾಸಕ್ತಿ ಬೇಡ– ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು ಸೆಪ್ಟೆಂಬರ್ 11(ಕರ್ನಾಟಕ ವಾರ್ತೆ)

ವಿಕಲಚೇತನರೆಂದುಕೊಂಡು ಬದುಕಿನಲ್ಲಿ ನಿರಾಸಕ್ತಿ ಬೆಳೆಸಿಕೊಳ್ಳದೆ ಸಮುದಾಯದ ಎಲ್ಲಾ ಚಟುವಟಿಕೆಗಳಲ್ಲೂ ಪಾಲ್ಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇಂದು ವಿಧಾನ ಸೌಧದ ಪೂರ್ವಮುಖ್ಯದ್ವಾರದಲ್ಲಿ ಏರ್ಪಡಿಸಿದ್ದ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನಗಳನ್ನು ವಿತರಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ವಿಕಲಚೇತನರು ಸಮುದಾಯದ ಅವಿಭಾಜ್ಯ ಅಂಗ, ಅವರ ಶ್ರೇಯೋಭಿವೃದ್ಧಿಗಾಗಿ ಸರ್ಕಾರ ಹಲವಾರು ಯೋಜನೆಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಿದ್ದು 2013–14 ರಲ್ಲಿ ಇಲಾಖೆಗೆ 647 ಕೋಟಿ ರೂ. ಬಿಡುಗಡೆ ಮಾಡಿದ್ದು ಪ್ರಸ್ತುತ ಸಾಲಿನಲ್ಲಿ ಅವರ ಶ್ರೇಯೋಭಿವೃದ್ದಿಗಾಗಿ 1074 ಕೋಟಿ ರೂ. ಅನುದಾನ ಒಗದಿಸಲಾಗಿದೆ ಎಂದರು.

ಅರ್ಹ ವಿಕಲಚೇತನರಿಗೆ ಈ ವರ್ಷದ ಡಿಸೆಂಬರ್ ಅಂತ್ಯದ ಒಳಗಾಗಿ ನಾಲ್ಕು ಸಾವಿರ ದ್ವಿಚಕ್ರ ವಾಹನಗಳನ್ನು ವಿತರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ರಾಜ್ಯದಲ್ಲಿ 2011 ರ ಜನಗಣತಿ ಪ್ರಕಾರ 13,24,204 ಜನ ವಿಕಲಚೇತನರಿರುವುದು ಕಂಡು ಬಂದಿದ್ದು ಅವರ ಶ್ರೇಯೋಭಿವೃದ್ಧಿಗಾಗಿ ಇನ್ನೂ ಹಲವು ಕಾರ್ಯಕ್ರಮಗಳನ್ನು ಜಾರಿಗೆ ತರಲಾಗುವುದು ಎಂದು ಹೇಳಿದರು.

ವಿಕಲಚೇತನರು ಸ್ವಾಭಿಮಾನದಿಂದ ಜೀವನ ನಡೆಸಬೇಕು ಎಂದು ಹೇಳಿದ ಅವರು ರಾಜ್ಯದಲ್ಲಿ ವಿಕಲಚೇತನರು ಎಷ್ಠಿದ್ದಾರೆ ಎಂಬ ಬಗ್ಗೆ ಮತ್ತೊಮ್ಮೆ ಸಮೀಕ್ಷೆ ನಡೆಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿಕಲಚೇತನರರು ಹಾಗೂ ಹಿರಿಯ ನಾಗರೀಕರಿಗೆ ಸೌಲಭ್ಯ ನೀಡುವಲ್ಲಿ ನಮ್ಮ ಸರ್ಕಾರ ಮಂಚೂಣಿಯಲ್ಲಿದ್ದು ಇತರ ರಾಜ್ಯಗಳಿಗೆ ಮಾದರಿಯಾಗಿದೆ. ಈ ಕಾರ್ಯಕ್ಕಾಗಿ ನಮ್ಮ ಸರ್ಕಾರಕ್ಕೆ ರಾಷ್ಟ್ರ ಪ್ರಶಸ್ತಿ ಸಹ ದೊರಕಿದೆ. ಬೇರೆ ಬೇರೆ ದೇಶಗಳು ನಮ್ಮ ರಾಜ್ಯ ನೋಡುವಂತೆ ವಿಕಲಚೇತನರರು ಹಾಗೂ ಹಿರಿಯ ನಾಗರೀಕರಿಗೆ ಸರ್ಕಾರದ ಸೌಲಭ್ಯ ಒದಗಿಸುವಲ್ಲಿ ಅಧಿಕಾರಿಗಳು ಆದ್ಯತೆ ಮೇಲೆ ಕೆಲಸ ಮಾಡಬೇಕು.

ನಮ್ಮ ಸರ್ಕಾರ ಆಡಳಿತಕ್ಕೆ ಬಂದ ಮೇಲೆ ವಿಕಲಚೇತನರು ಹಾಗೂ ಹಿರಿಯ ನಾಗರೀಕರಿಗೆ ವಿದ್ಯಾರ್ಥಿವೇತನ, ವಿವಾಹ ಪ್ರೋತ್ಸಾಹಧನ, ಅಂದ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ವೈದ್ಯಕೀಯ ಪರಿಹಾರದಂತ ಹಲವು ಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಉಮಾಶ್ರೀ ಅವರು ತಮ್ಮ ಪ್ರಾಸ್ತಾವಿಕ ಭಾಷಣದಲ್ಲಿ ತಿಳಿಸಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಉಮಾಮಹದೇವನ್, ಬೆಂಗಳೂರು ನಗರ ಜಿಲ್ಲಾ ಪಂಚಾಯತಿಯ ಕಾರ್ಯ ನಿರ್ವಹಣಾಧಿಕಾರಿ ಶ್ರೀಮತಿ ಅರ್ಚನಾ, ನಿರ್ದೇಶಕ ಡಾ: ಸಿದ್ದರಾಜು ಸೇರಿದಂತೆ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಸಂಖ್ಯೆ 50/175

## ಬಸವ ಕಲ್ಯಾಣ ಅನುಭವ ಮಂಟಪ ನಿರ್ಮಾಣ ಸಲಹಾ ಸಮಿತಿಯಿಂದ ಮುಖ್ಯಮಂತ್ರಿ ಅವರಿಗೆ ವರದಿ ಸಲ್ಲಿಕೆ

ಬೆಂಗಳೂರು, ಸೆಪ್ಟೆಂಬರ್ 11 ( ಕರ್ನಾಟಕ ವಾರ್ತೆ) :

ಬೀದರ್ ಜಿಲ್ಲೆಯ ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ, ಬಸವ ಕಲ್ಯಾಣ ನೂತನ ಅನುಭವ ಮಂಟಪ ನಿರ್ಮಾಣ ತಜ್ಞರ ಸಲಹಾ ಸಮಿತಿಯು ಇಂದು ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವರದಿಯನ್ನು ಸಲ್ಲಿಸಿತು.

ವರದಿಯನ್ನು ಸ್ವೀಕರಿಸಿ ಮಾತನಾಡಿದ ಮುಖ್ಯಮಂತ್ರಿ ಅವರು ವರದಿಯನ್ನು ಈಗಷ್ಟೇ ಪಡೆದಿದ್ದೇನೆ ಪರಿಶೀಲನೆ ನಡೆಸಿ ಕ್ರಮಕೈಗೊಳ್ಳಲಾಗುವುದಾಗಿ ತಿಳಿಸಿದರು.

ಸ್ಮಾರಕ ನಿರ್ಮಾಣ ಮಾಡುವಂತೆ ಸಮಿತಿಯು ತಿಳಿಸಿದೆ. ಈ ಸಂಬಂಧ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಪೌರಾಡಳಿತ ಸಚಿವ ಈಶ್ವರ್ ಖಂಡ್ರೆ, ಜಾನಪದ ತಜ್ಞ ಗೋ. ರೂ. ಚನ್ನಬಸಪ್ಪ, ಶಾಸಕರುಗಳಾದ ಮಲ್ಲಿಕಾರ್ಜುನ ಕೂಬಾ, ರಾಜಶೇಖರ್ ಪಾಟೀಲ್ ಸೇರಿದಂತೆ ಇತರರು ಹಾಜರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

<u>ಸಂಖ್ಯೆ 51/176</u>

## ಸೆಪ್ಟೆಂಬರ್ 21 ರಿಂದ 29 ರವರಗೆ
## ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ – 2017

ಬೆಂಗಳೂರು, ಸೆಪ್ಟೆಂಬರ್ 11 ( ಕರ್ನಾಟಕ ವಾರ್ತೆ) :

ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಉತ್ಸವ ಸಮಿತಿ, ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ್ 9 ರಿಂದ 29 ರವರೆಗೆ "ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ–2017" ನ್ನು ಮೈಸೂರಿನಲ್ಲಿ ಏರ್ಪಡಿಸಲಾಗುವುದು.

ಈ ಪುಸ್ತಕ ಮೇಳದಲ್ಲಿ ಕನ್ನಡ ಪ್ರಕಾಶಕರು/ಮಾರಾಟಗಾರರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ ರೂ 2,000/– ಭದ್ರತಾ ಠೇವಣಿ ಡಿ.ಡಿ. ಯನ್ನು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು – ಅವರ ಹೆಸರಿನಲ್ಲಿ ಡಿ.ಡಿ. ಯನ್ನು ಸಲ್ಲಿಸಲು ಸೂಚಿಸಲಾಗಿದೆ.

ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ಪ್ರಕಾಶಕರು/ಮಾರಾಟಗಾರರು ನಿಗದಿತ ಅರ್ಜಿ ನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರಿನ ಕಚೇರಿ ಅಥವಾ ಆಯಾ ಜಿಲ್ಲೆಯಲ್ಲಿರುವ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿಗಳಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್ **www.kannadapustakapradhikara.com** ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ.

ಭರ್ತಿಮಾಡಿದ ಅರ್ಜಿಯನ್ನು ಡಿ.ಡಿ. ಯೊಂದಿಗೆ ಸೆಪ್ಟೆಂಬರ್ 18 ರಂದು ಸಂಜೆ 5.00 ರೊಳಗೆ ಆಡಳಿತಾದಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ,

ಬೆಂಗಳೂರು – ಅವರ ಹೆಸರಿಗೆ ಅಂಚೆಯ ಮೂಲಕ ಹಾಗೂ ಇ-ಮೇಲ್ kannadappradhikara@gmail.com ರ ಮೂಲಕ ಸಲ್ಲಿಸಲು ಕೋರಿದೆ. ನಿರ್ಮಿಸಲಾಗುವ 50 ಮಳಿಗೆಗಳನ್ನು ಆದ್ಯತೆಯ ಮೇರೆಗೆ ಹಂಚಿಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ದೂ. 080 – 22484516/22107704 ಅನ್ನು ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 52/177

## ಪರಿಶಿಷ್ಟ ಜಾತಿ/ಪಂಗಡದ ಪತ್ರಿಕೋದ್ಯಮ ಪದವಿದರ ಅಭ್ಯರ್ಥಿಗಳಿಗೆ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು ಸೆಪ್ಟೆಂಬರ್ 11(ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪತ್ರಿಕೋದ್ಯಮ ಪದವಿ, ಸ್ನಾತಕೋತ್ತರ ಪದವಿ, ವಿದ್ಯುನ್ಮಾನ ಮಾಧ್ಯಮದಲ್ಲಿ ಪದವಿ, ಪಿ.ಜಿ. ಡಿಪ್ಲೊಮಾ ಪಡೆದ ಅಭ್ಯರ್ಥಿಗಳಿಗಾಗಿ ಆರು ದಿವಸಗಳ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನಿಸಿದೆ.

ಅಭ್ಯರ್ಥಿಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅರ್ಜಿ ನಮೂನೆಯನ್ನು ಪಡೆಯಬಹುದು. ಇಲ್ಲವೆ ಇಲಾಖೆಯ ವೆಬ್‌ಸೈಟ್ www.karnatakainforamtion.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅಭ್ಯರ್ಥಿ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ, ಶೇಕಡಾವಾರು ಅಂಕ, ಉದ್ಯೋಗ ವಿವರ ಈ ಹಿಂದೆ ಯಾವುದಾದರು ತರಬೇತಿ ಪಡೆದ ವಿವರ ಹಾಗೂ ವಿಶೇಷ ಸಾಧನೆಗಳನ್ನೊಳಗೊಂಡ ಸ್ವ ವಿವರಗಳ ಮಾಹಿತಿಗಳನ್ನು ಭರ್ತಿ ಮಾಡಿ ಸ್ವ ವಿಳಾಸ ಇರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯೊಂದಿಗೆ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ಧೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 21-9-2017 ರ ಸಂಜೆ 5-00

ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು 560 001 ಇವರಿಗೆ ಸಲ್ಲಿಸಬೇಕು.

ಲಕೋಟೆಯ ಮೇಲ್ಭಾಗದಲ್ಲಿ "ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ" ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ, ಉಪ ನಿರ್ದೇಶಕರು ಇವರನ್ನು ದೂರವಾಣಿ ಸಂಖ್ಯೆ 080– 22028037/87 ರ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಅಭ್ಯರ್ಥಿ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ, ಶೇಕಡಾವಾರು ಅಂಕ, ಉದ್ಯೋಗ ವಿವರ ಹಾಗೂ ಈ ಹಿಂದೆ ಯಾವುದಾದರು ತರಬೇತಿ ಪಡೆದ ವಿವರ ಮತ್ತು ವಿಶೇಷ ಸಾಧನೆಗಳನ್ನೊಳಗೊಂಡ ಸ್ವ ವಿವರಗಳ ಮಾಹಿತಿಗಳನ್ನು ಭರ್ತಿ ಮಾಡಿ ಸ್ವ ವಿಳಾಸ ಇರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯೊಂದಿಗೆ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ಧೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 3–10–2017 ರ ಸಂಜೆ 5–00 ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು 560 001 ಇವರಿಗೆ ಸಲ್ಲಿಸಬೇಕು.

ಲಕೋಟೆಯ ಮೇಲ್ಭಾಗದಲ್ಲಿ "ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ)" ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ, ಉಪ ನಿರ್ದೇಶಕರು ಇವರನ್ನು ದೂರವಾಣಿ ಸಂಖ್ಯೆ 080–22028037/87 ರ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ 53/178

# ಮುಖ್ಯಮಂತ್ರಿಗಳಿಗೆ ಅಭಿನಂದನೆ

ಬೆಂಗಳೂರು ಸೆಪ್ಟೆಂಬರ್ 11(ಕರ್ನಾಟಕ ವಾರ್ತೆ)

ಅಖಿತ ಭಾರತ ಮಟ್ಟದಲ್ಲಿ ಸೆಪ್ಟಂಬರ್ 2017ರಲ್ಲಿ ಆರಂಭವಾಗಲಿರುವ ಐ.ಬಿ.ಪಿ.ಎಸ್.ನ ಬ್ಯಾಂಕಿಂಗ್ ಸೇವೆಗಳ ನೇಮಕಾತಿ ಪರೀಕ್ಷೆಯಲ್ಲಿ ಸ್ಥಳಿಯರಿಗೆ ಪ್ರಾತಿನಿಧ್ಯ ಕಲ್ಪಿಸುವಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ನಡೆಸಿರುವ ಪ್ರಯತ್ನಕ್ಕೆ ರಾಜ್ಯದ ಮುಖ್ಯಮಂತ್ರಿಗಳು ಕೇಂದ್ರ ವಿತ್ತ ಸಚಿವರಾದ ಶ್ರೀ ಅರುಣ್ ಜೇಟ್ಲಿರವರಿಗೆ ಪತ್ರ

ಮುಖೇನ ಆಗ್ರಹಿಸುವ ಮೂಲಕ ತಮ್ಮ ಬೆಂಬಲವನ್ನು ನೀಡಿದ್ದಾರೆ. ಪ್ರಾಧಿಕಾರದ ಅಧ್ಯಕ್ಷರು ಮಾನ್ಯ ಮುಖ್ಯಮಂತ್ರಿಗಳ ಈ ಕ್ರಮಕ್ಕೆ ಅಭಿನಂದಿಸಿದ್ದಾರೆ.